ದೂರವಾಣಿ : 080-2976 2005, 2976 2006
ವೆಬ್‌ಸೈಟ್ : www.kanakapura.tpa.gov.in
E-mail : kkpaplan@gmail.com

# ಕನಕಪುರ ಯೋಜನಾ ಪ್ರಾಧಿಕಾರ

ಖಾತಾ ನಂ. 469/CA, ಸಹಕಾರಿ ವಸತಿ ಬಡಾವಣೆ, ಅಗ್ರಹಾರ ನ್ಯೂ ಕಾಲೋನಿ, ತುಂಗಣಿ ಅಂಚೆ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ

ಸಂಖ್ಯೆ: ಕಯೋಪ್ರಾ/ಪ್ರಾಪ್ರಪತ್ರ/76/2023-24/479 ದಿನಾಂಕ: 14 JUN 2024

## ಪ್ರಾರಂಭಿಕ ಪ್ರಮಾಣ ಪತ್ರ

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 15(1) ರನ್ವಯ)
(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳು 1965 ನಿಯಮ 30 ನಮೂನೆ 3ರನ್ವಯ)

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕಗ್ಗಲೀಪುರ ಗ್ರಾಮದ ಸ.ನಂ. 179, 182/1 & 182/2 ರಲ್ಲಿ ಒಟ್ಟು 5ಎ-23.04ಗುಂ ಅನುಮೋದಿತ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಕಗ್ಗಲೀಪುರ ಗ್ರಾಮ ಪಂಚಾಯಿತಿ ಖಾತಾ ಸಂಖ್ಯೆ: 1848/179 182/1 182/2 (ಇ-ಖಾತಾ ಸಂಖ್ಯೆ : 150200300100326063) ರಲ್ಲಿ ವಸತಿ ಉದ್ದೇಶದ ಕಟ್ಟಡ ಕಟ್ಟಲು ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುವ ಬಗ್ಗೆ.

ಉಲ್ಲೇಖ:
1) ನಿಮ್ಮ ಮನವಿ ಪತ್ರ ದಿನಾಂಕ : 01.02.2024 & 12.03.2024.
2) ಈ ಕಛೇರಿ ಪತ್ರ ಸಂಖ್ಯೆ:ಕಯೋಪ್ರಾ/ಎಲ್‌ಎಓ/47/2023-24 ದಿನಾಂಕ: 21.12.2023.
3) ಮಹಾನಗರ ಆಯುಕ್ತರುರವರ ಕಛೇರಿ ಪತ್ರ ಸಂಖ್ಯೆ: BMRDA/RULES/158/2023-24 ದಿನಾಂಕ : 23.02.2024
4) ಪ್ರಾಧಿಕಾರಕ್ಕೆ ಶುಲ್ಕ ಪಾವತಿಸಿದ ರಸೀದಿ ನಂ. 1765 ದಿನಾಂಕ : 12.06.2024.

******

ವಿಷಯಕ್ಕೆ ಸಂಬಂಧಿಸಿದಂತೆ, M/s Sattava Resi Pvt. Ltd., Authorised Signatory ಶ್ರೀ ಬಿಜಯ್ ಕುಮಾರ್ ಅಗರ್‌ವಾಲ್ ಇವರು ಉಲ್ಲೇಖ(1)ರ ಪತ್ರದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕಗ್ಗಲೀಪುರ ಗ್ರಾಮದ ಸ.ನಂ. 179, 182/1 & 182/2 ರಲ್ಲಿ ಒಟ್ಟು 5ಎ-23.04ಗುಂ ಅನುಮೋದಿತ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಕಗ್ಗಲೀಪುರ ಗ್ರಾಮ ಪಂಚಾಯಿತಿ ಖಾತಾ ಸಂಖ್ಯೆ: 1848/179 182/1 182/2 (ಇ-ಖಾತಾ ಸಂಖ್ಯೆ : 150200300100326063) ರಲ್ಲಿ ವಸತಿ ಉದ್ದೇಶದ ಕಟ್ಟಡ ಕಟ್ಟಲು ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುತ್ತಾರೆ. ಪ್ರಸ್ತಾವಿತ ಜಮೀನಿಗೆ ಪ್ರಾಧಿಕಾರದಿಂದ ಈಗಾಗಲೇ ಉಲ್ಲೇಖ (2)ರ ಪತ್ರದಲ್ಲಿ ವಸತಿ ಉದ್ದೇಶದ ಅಭಿವೃದ್ಧಿ ನಕ್ಷೆಗೆ ಅನುಮೋದನೆ ನೀಡಲಾಗಿದೆ. ವಿಷಯದ ಕುರಿತು ಮಹಾನಗರ ಯೋಜಕರು ಉಲ್ಲೇಖ (3) ರನ್ವಯ ದಿನಾಂಕ : 30.05.2024ರಲ್ಲಿ ಸಹಮತವನ್ನು ನೀಡಿರುತ್ತಾರೆ. ಅರ್ಜಿದಾರರು ಉಲ್ಲೇಖ (4) ರಲ್ಲಿ ನಿಗಧಿತ ಶುಲ್ಕಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.

ಹಾಗಾಗಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷೆನ್ 15(1) ರನ್ವಯ ಚೀಲೂರು ಗ್ರಾಮ ಪಂಚಾಯಿತಿ ಖಾತಾ ಸಂಖ್ಯೆ: 1848/179 182/1 182/2 (ಇ-ಖಾತಾ ಸಂಖ್ಯೆ : 150200300100326063) ರಲ್ಲಿ ವಸತಿ ಉದ್ದೇಶದ ಕಟ್ಟಡ ಕಟ್ಟಲು M/s Sattava Resi Pvt. Ltd., Authorised Signatory ಶ್ರೀ ಬಿಜಯ್ ಕುಮಾರ್ ಅಗರ್‌ವಾಲ್ ಇವರಿಗೆ ಈ ಕೆಳಕಂಡ ಷರತ್ತುಗೊಳಪಟ್ಟು ಪ್ರಾರಂಭಿಕ ಪ್ರಮಾಣ ಪತ್ರ ನೀಡಲಾಗಿದೆ.

.....2

:: ಷರತ್ತುಗಳು ::

1. ಪ್ರಶ್ನಿತ ನಿವೇಶನದಲ್ಲಿ ಕಟ್ಟುವ ಕಟ್ಟಡಗಳನ್ನು ಈ ಕಛೇರಿಯಿಂದ ಅನುಮತಿ ನೀಡಿರುವಂತೆ ವಸತಿ ಉದ್ದೇಶಕ್ಕೆ ಮಾತ್ರ ಉಪಯೋಗಿಸತಕ್ಕದ್ದು ಮತ್ತು ಕಟ್ಟಡಗಳನ್ನು ಅನುಮೋದಿತ ನಕ್ಷೆಯಂತೆ ನಿರ್ಮಿಸತಕ್ಕದ್ದು.
2. ಈ ಪ್ರಾರಂಭಿಕ ಪ್ರಮಾಣ ಪತ್ರವು ಅನುಮೋದನೆ ದಿನಾಂಕದಿಂದ ಎರಡು ವರ್ಷದವರೆಗೆ ಮಾತ್ರ ಮಾನ್ಯತೆ ಹೊಂದಿರುತ್ತದೆ. ಈ ಅವಧಿ ಮುಗಿದ ನಂತರ ಹೊಸದಾಗಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯದೆ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಹಾಗೂ ಮುಂದುವರೆಸಬಾರದು.
3. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ನಿರಾಕ್ಷೇಪಣಾ ಪತ್ರ ಸಂಖ್ಯೆ : CTE-340788 Date : 23.11.2023 ರಲ್ಲಿನ ಷರತ್ತುಗಳಿಗೆ ಬದ್ಧರಾಗಿತಕ್ಕದ್ದು.
4. ಬೆಸ್ಕಾಂ ಪತ್ರ ಸಂಖ್ಯೆ : CEE/BMASZ/SEE(O)/AE2/23-24 Date : 24.01.2024 ರಲ್ಲಿನ ಷರತ್ತುಗಳಿಗೆ ಬದ್ಧರಾಗಿತಕ್ಕದ್ದು.
5. ಕಟ್ಟಡಗಳ ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದಲ್ಲ.
6. ಕಟ್ಟಡಗಳ ನಿರ್ಮಾಣಕ್ಕೆ ಜಾರಿಯಲ್ಲಿರುವ ವಲಯ ನಿಯಮಾವಳಿಗಳು ಮತ್ತು ಕಟ್ಟಡದ ವಿಧಿಗಳ ನಿಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು.
7. ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಮತ್ತು ಏನಾದರೂ ಬದಲಾವಣೆಗಳು ಅವಶ್ಯವಿದ್ದಲ್ಲಿ ಕಟ್ಟಡ ನಿರ್ಮಾಣಕ್ಕೆ ಮುಂಚೆ ಮಾರ್ಪಾಡಿತ ಕಟ್ಟಡ ನಕ್ಷೆಗೆ ಅನುಮೋದನೆ ಪಡೆದು ಮುಂದುವರೆಸತಕ್ಕದ್ದು.
8. ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿ ತಳಪಾಯ ಹಾಗೂ ಇತರ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಾರಂಭಿಕ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.
9. ಕಟ್ಟಡದ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ Structural Detials ಪಡೆದು ಅದರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.
10. ಅನುಮೋದಿತ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.
11. ಕಟ್ಟಡ ನಿರ್ಮಾಣ ಸಾಮಾಗ್ರಿಗಳನ್ನು ರಸ್ತೆಯಲ್ಲಿ ಶೇಖರಣೆ ಮಾಡಬಾರದು. ಈ ಬಗ್ಗೆ ಕಂಡುಬಂದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ರದ್ದು ಪಡಿಸಲಾಗುವುದು.
12. ಕಟ್ಟಡ ಜಾಗ ಹೊರತುಪಡಿಸಿ ಉಳಿದ ಸೂಕ್ತ ಪ್ರದೇಶದಲ್ಲಿ ಹಾಲಿ ಇರುವ ಮರಗಳನ್ನು ಉಳಿಸಿಕೊಂಡು ಹೊಸದಾಗಿ ಮರ/ಗಿಡಗಳನ್ನು ಬೆಳಸತಕ್ಕದ್ದು.
13. ನಿವೇಶನದ ಆವರಣದೊಳಗೆ ಮಳೆ ನೀರು ಕೊಯ್ಲನ್ನು ಕಡ್ಡಾಯವಾಗಿ ಅಳವಡಿಸತಕ್ಕದ್ದು.
14. ಸೋಲಾರ್ ವಾಟರ್ ಹೀಟರ್‌ನ್ನು ಕಟ್ಟಡದಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.
15. ಪ್ರಸ್ತಾವಿತ ನಿವೇಶನವು ಯಾವುದೇ ಭೂ ಸ್ವಾಧಿನಕ್ಕೆ ಒಳಪಟ್ಟಿದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

Housiey.com

ದೂರವಾಣಿ : 080-2976 2005, 2976 2006
ವೆಬ್‌ಸೈಟ್ : www.kanakapura.tpa.gov.in
E-mail : kkpaplan@gmail.com

# ಕನಕಪುರ ಯೋಜನಾ ಪ್ರಾಧಿಕಾರ

ಖಾತಾ ನಂ. 469/CA, ಸಹಕಾರಿ ವಸತಿ ಬಡಾವಣೆ, ಅಗ್ರಹಾರ ನ್ಯೂ ಕಾಲೋನಿ, ತುಂಗಣಿ ಅಂಚೆ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ

16. ಈ ನಿವೇಶನದ ಬಗ್ಗೆ ಏನಾದರೂ ಸಿವಿಲ್ ವಾಜ್ಯಗಳು ಉದ್ಭವಿಸಿದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ನೀವು ಬದ್ಧರಾಗಿರತಕ್ಕದ್ದು.
17. ಈ ಪ್ರಾಧಿಕಾರದಿಂದ ನೀಡಲಾಗಿರುವ ಅಭಿವೃದ್ಧಿ ನಕ್ಷೆಯಲ್ಲಿನ ಎಲ್ಲಾ ಷರತ್ತುಗಳನ್ನು ತಪ್ಪದೇ ಪಾಲಿಸತಕ್ಕದ್ದು.
18. **ಅಧಿಕ ವಿದ್ಯುತ್ ತಂತಿ (H.T. Line) ಹಾದು ಹೋಗಿದ್ದಲ್ಲಿ ವಲಯ ನಿಯಮಾವಳಿಯನುಸಾರ ಜಾಗವನ್ನು ಕಾಯ್ದಿರಿಸತಕ್ಕದ್ದು.**
19. ಈ ಕಟ್ಟಡ ನಕ್ಷೆ ಮಂಜೂರಾತಿ ಪಡೆಯಲು ನೀವು ತಪ್ಪು ಮಾಹಿತಿ / ದಾಖಲೆಗಳನ್ನು ನೀಡಿರುವುದು ಕಂಡುಬಂದರೆ ಈ ಮಂಜೂರಾತಿ ಆದೇಶವು ಸ್ವಯಂ ರದ್ದಾಗುತ್ತದೆಂದು ತಿಳಿಯತಕ್ಕದ್ದು.
20. ನುರಿತ ಇಂಜಿನಿಯರ್‌ರ ಮೇಲ್ವಿಚಾರಣೆಯಲ್ಲಿ ಹಾಗೂ ಕಟ್ಟಡ ಕಾರ್ಮಿಕರ ಸಂಪೂರ್ಣ ಸುರಕ್ಷತೆಯೊಂದಿಗೆ ಕಟ್ಟಡ ಕಾರ್ಯವನ್ನು ಕೈಗೊಳ್ಳುವುದು.
21. ಸರ್ಕಾರವು ನಿಗಧಿಪಡಿಸುವ ಇತರೆ ಯಾವುದೇ ಶುಲ್ಕಗಳನ್ನು ಸಂಸ್ಥೆಯವರೇ ಪಾವತಿಸತಕ್ಕದ್ದು.
22. ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ ಲಗತ್ತಿಸಿರುವ ಅನುಮೋದಿತ ಕಟ್ಟಡ ನಕ್ಷೆಗಳನ್ನು ಚೀಲೂರು ಗ್ರಾಮ ಪಂಚಾಯಿತಿಗೆ ಸಲ್ಲಿಸಿ, ಪಂಚಾಯಿತಿಯಿಂದ ಪರವಾನಗಿ ಪಡೆಯತಕ್ಕದ್ದು.

Housiey.com

ತಮ್ಮ ವಿಶ್ವಾಸಿ,

14/06/2024

ಜಂಟಿ ನಿರ್ದೇಶಕರು
ನಗರ ಮತ್ತು ಗ್ರಾಮಾಂತರ ಯೋಜನೆ
ಹಾಗೂ ಸದಸ್ಯ-ಕಾರ್ಯದರ್ಶಿ
ಕನಕಪುರ ಯೋಜನಾ ಪ್ರಾಧಿಕಾರ
ಕನಕಪುರ.

**ಇವರಿಗೆ,**

ಶ್ರೀ ಬಿಜಯ್ ಕುಮಾರ್ ಅಗರ್‌ವಾಲ್,
Authorised Signatory,
M/s Sattava Resi Pvt. Ltd.,
No. 3, Salarpuria Windsor,
4th Floor, Halasur Road,
Bangalore-560 042

**ಯಥಾಪ್ರತಿಯನ್ನು :**

1) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಗ್ಗಲೀಪುರ ಗ್ರಾಮಪಂಚಾಯಿತಿ, ಕಗ್ಗಲೀಪುರ ಇವರಿಗೆ ಪ್ರಾರಂಭಿಕ ಪ್ರಮಾಣ ಪತ್ರ ಮತ್ತು ಕಟ್ಟಡ ನಕ್ಷೆಯ ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.
2) ಕಛೇರಿ ಪ್ರತಿ.